ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ನಗರ ಯೋಜನಾ ಪ್ರಾಧಿಕಾರಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

114 (124) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿರುವ ನಗರ ಯೋಜನೆ ಪ್ರಾಧಿಕಾರಗಳು ಯಾವುವು ; ಅವುಗಳ ಕಾರ್ಯವ್ಯಾಪ್ತಿಯೇನು ; (ಸಂಪೂರ್ಣ ವಿವರ ನೀಡುವುದು)

(ಆ) ಈ ನಗರ ಯೋಜನೆ ಪ್ರಾಧಿಕಾರಗಳಿಂದ ಯಾವ ಯಾವ ಪ್ರದೇಶಗಳಲ್ಲಿ ವಸತಿ ಬಡಾವಣೆಗಳನ್ನು ನಿರ್ಮಾಣ ಮಾಡಲಾಗಿದೆ; ಈ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಾಣ ಮಾಡಲಾಗಿದೆ ; ಇವುಗಳ ವಿಸ್ತೀರ್ಣವೆಷ್ಟು; ಈ ಬಡಾವಣೆಗಳನ್ನು ಯಾವಾಗ ನಿರ್ಮಾಣ ಮಾಡಲಾಗಿದೆ ; (ಬಡಾವಣೆವಾರು ವಿವರ ನೀಡುವುದು)

(ಇ) ಈ ಪ್ರಾಧಿಕಾರಗಳು ಬಡಾವಣೆಗಳ ಅಭಿವೃದ್ಧಿಗಾಗಿ ಇಲ್ಲಿಯವರೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಈ ಕಾಮಗಾರಿಗಳಿಗೆ ಆದ ವೆಚ್ಚವೆಷ್ಟು ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರ ವಿವರಗಳನ್ನು ಬಡಾವಣೆವಾರು ನೀಡುವುದು ?